ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಲೋಕೋಪಯೋಗಿ ಇಲಾಖೆಯ ವಿವಿಧ ಶೀರ್ಷಿಕೆಗಳಡಿ ಕೈಗೊಂಡ ಕಾಮಗಾರಿಯ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

204 (422) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2014-15ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ನೇಮಕ ಮಾಡಿಕೊಳ್ಳಲಾದ ಲೆಕ್ಕ ಸಹಾಯಕರುಗಳ ಸಂಖ್ಯೆ ಎಷ್ಟು; ಯಾವ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ; ಸದರಿಯವರಿಗೆ ಯಾವ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ವೇತನ ಪಾವತಿ ಮಾಡಲಾಗುತ್ತಿದೆ; (ವಿವರ ಒದಗಿಸುವುದು)

(ಆ) ಈ ರೀತಿ ನೇಮಕ ಮಾಡಿಕೊಂಡ ನೌಕರರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಇದಕ್ಕೆ ಯಾವ ಮಾನದಂಡಗಳನ್ನು ರೂಪಿಸಲಾಗಿದೆ;

(ಇ) ಕೃಷಿ ಇಲಾಖೆಯಲ್ಲಿ ಈ ರೀತಿ ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಇದೆಯೇ; ಇದ್ದಲ್ಲಿ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕ ಸಹಾಯಕರನ್ನು ನೇಮಕ ಮಾಡಿಕೊಳ್ಳಲು ಇರುವ ತೊಡಕುಗಳೇನು?